ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಗಳಲ್ಲಿ ಲಾಕ್‌ಡೌನ್ ಅವಧಿಯಲ್ಲಿ ಮಳಿಗೆಗಳ ವ್ಯಾಪಾರವಿಲ್ಲದ ಕುರಿತು

ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-

714 (746) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣಗಳಲ್ಲಿ ಮಳಿಗೆಗಳನ್ನು ಹೊಂದಿದ್ದವರು ಲಾಕ್ ಡೌನ್ ಅವಧಿಯಲ್ಲಿ ವ್ಯಾಪಾರವಿಲ್ಲದೆ ನಷ್ಟ ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಲಾಕ್ ಡೌನ್ ಅವಧಿಯ ಬಾಡಿಗೆಯನ್ನು ಮನ್ನಾ ಮಾಡುವ ಬಗ್ಗೆ ಸರ್ಕಾರ ನಿರ್ಣಯ ಕೈಗೊಂಡಿದೆಯೇ;

(ಇ) ಕೈಗೊಂಡಿದ್ದಲ್ಲಿ, ಎಷ್ಟು ತಿಂಗಳ ಅವಧಿಗೆ ಬಾಡಿಗೆ ಮನ್ನಾ ಮಾಡಲು ಉದ್ದೇಶಿಸಿದೆ ?